**ಕಾರ್ಯದರ್ಶಿ ಹಾಗೂ ಖಜಾಂಚಿಗಳ ಕಛೇರಿ, ರಾಷ್ಟ್ರೀಯ ಶಿಕ್ಷಕರ ಕಲ್ಯಾಣ ಪ್ರತಿಷ್ಠಾನ, ಕರ್ನಾಟಕ ರಾಜ್ಯ ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿ, ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ, ಶಿಕ್ಷಕರ ಸದನ, ಕೆಂಪೇಗೌಡ ರಸ್ತೆ, ಬೆಂಗಳೂರು-2,**

**ದೂರವಾಣಿ ಸಂಖ್ಯೆ: 080-22483434 ಇ-ಮೇಲ್-kstbf63@gmail.com**

ಸಂಖ್ಯೆ: ಸಿಬ್ಬಂದಿ1(1)/ಉ.ವ್ಯಾಧನಸಹಾಯ//2020-2021 ದಿನಾಂಕ: 02-02-2021

## ಸುತ್ತೋಲೆ

ವಿಷಯ:- 2020-21ನೇ ಸಾಲಿಗೆ ಶಿಕ್ಷಕರ ಮಕ್ಕಳ ಉನ್ನತ ವ್ಯಾಸಂಗ ಧನಸಹಾಯ ಮಂಜೂರು ಮಾಡಲು ಅರ್ಜಿಗಳನ್ನು ಆಹ್ವಾನಿಸುವ ಬಗ್ಗೆ.

** ** **

2020-21ನೇ ಶೈಕ್ಷಣಿಕ ಸಾಲಿನಲ್ಲಿ ವ್ಯಾಸಂಗ ಮಾಡುತ್ತಿರುವ ಶಿಕ್ಷಕರ ಮಕ್ಕಳ ಉನ್ನತ ವ್ಯಾಸಂಗಕ್ಕೆ ಧನಸಹಾಯ ಮಂಜೂರು ಮಾಡುವ ಸಲುವಾಗಿ ರಾಷ್ಟ್ರೀಯ ಶಿಕ್ಷಕರ ಕಲ್ಯಾಣ ಪ್ರತಿಷ್ಠಾನದಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ/ನಮೂನೆಗಳನ್ನು ಸಾರ್ವಜನಿಕ ಶಿಕ್ಷಣ ಇಲಾಖೆಯ ಅಂತರ್ಜಾಲದಿಂದ (www.schooleducation.kar.nic.in) ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ. ಅರ್ಹ ಶಿಕ್ಷಕರು (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣದ ವ್ಯಾಪ್ತಿಯ) ಆಯಾ ವಲಯದ ಕ್ಷೇತ್ರಶಿಕ್ಷಣಾಧಿಕಾರಿಗಳ ಮೂಲಕ ನಿಧಿಗಳ ಕಛೇರಿಗೆ ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಲು ಈ ಮೂಲಕ ತಿಳಿಸಿದೆ. ಅರ್ಜಿಗಳನ್ನು ಸಕಾಲದಲ್ಲಿ ನಿಧಿಗಳ ಕಛೇರಿಗೆ ಸಲ್ಲಿಸುವ ಜವಾಬ್ದಾರಿ ಆಯಾ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿಗಳವರದ್ದಾಗಿರುತ್ತದೆ. ಪದವಿ ಪೂರ್ವ ಕಾಲೇಜು ಹಾಗೂ ಅದಕ್ಕೂ ಮೇಲ್ಪಟ್ಟ ವಿವಿಧ ವಿದ್ಯಾಸಂಸ್ಥೆಗಳ ಪ್ರಾಚಾರ್ಯರು/ ಉಪನ್ಯಾಸಕರುಗಳು, ಅವರವರ ಮೇಲಾಧಿಕಾರಿಗಳ ಮುಖಾಂತರ ಅರ್ಜಿಗಳನ್ನು ಸಲ್ಲಿಸಬೇಕು. ಒಂದು ಕುಟುಂಬಕ್ಕೆ ಒಬ್ಬ ವಿದ್ಯಾರ್ಥಿಗೆ ಮಾತ್ರ ಧನಸಹಾಯ ನೀಡಲಾಗುವುದು. ವಿದ್ಯಾರ್ಥಿಯ ತಂದೆ/ ತಾಯಿ ಇಬ್ಬರೂ ಶಿಕ್ಷಕರು/ ಉಪನ್ಯಾಸಕರಾಗಿದ್ದಲ್ಲಿ ಕುಟುಂಬಕ್ಕೆ ಒಬ್ಬರು ಮಾತ್ರ ಅರ್ಜಿ ಸಲ್ಲಿಸಲು ಅವಕಾಶವಿರುತ್ತದೆ.

**ದಿನಾಂಕ 07.1.2020 ರಂದು ನಡೆದ ರಾಜ್ಯ ಸಮಿತಿ ಸಭೆಯಲ್ಲಿ ಉನ್ನತ ವ್ಯಾಸಂಗ ಧನಸಹಾಯದ ದರವನ್ನು ಪರಿಷ್ಕರಿಸಿದ್ದು, ವಿವರ ಈ ಕೆಳಕಂಡಂತಿದೆ.**

| ಕ್ರಮ ಸಂಖ್ಯೆ | ಪ್ರಸ್ತುತ ನೀಡುತ್ತಿರುವ ಧನಸಹಾಯದ ದರ | ಪರಿಷ್ಕರಿಸಿರುವ ಧನಸಹಾಯದ ದರ |
|---|---|---|
| 1 | 1000/- | 1250/- |
| 2 | 1500/- | 1875/- |
| 3 | 3000/- | 3750/- |

**ಈ ಕೆಳಕಂಡ ನ್ಯೂನ್ಯತೆಗಳನ್ನೊಳಗೊಂಡ ಅರ್ಜಿಗಳನ್ನು ತಿರಸ್ಕರಿಸಲಾಗುವುದು:**

1. ನಿಯಂತ್ರಣಾಧಿಕಾರಿಗಳ ಸಹಿ ಇಲ್ಲದೆ ನೇರವಾಗಿ ಸೇವೆಯಲ್ಲಿರುವ ಶಿಕ್ಷಕರು ಸಲ್ಲಿಸಿದ ಅರ್ಜಿಗಳು (ನಿವೃತ್ತ ಶಿಕ್ಷಕರನ್ನು ಹೊರತು ಪಡಿಸಿ).
2. ಆಜೀವ ಸದಸ್ಯತ್ವ ಪಡೆಯದ ಶಿಕ್ಷಕರು (ಆಜೀವ ಸದಸ್ಯತ್ವದ ಕಾರ್ಡಿನ ಜೆರಾಕ್ಸ ಪ್ರತಿಯನ್ನು ಕಡ್ಡಾಯವಾಗಿ ಲಗತ್ತಿಸಿರಬೇಕು)
3. ಅರ್ಜಿಯಲ್ಲಿ ನಮೂದಾಗದೇ ಇರುವ ಕೋರ್ಸುಗಳು.
4. CA,PHD, ಕೋರ್ಸಗಳಿಗೆ ಧನಸಹಾಯ ನೀಡಲಾಗುವುದಿಲ್ಲ.
5. ಶಿಕ್ಷಕರ ಸಹಿ ಇಲ್ಲದ ಅರ್ಜಿಗಳು.(ಬೋಧಕೇತರ ಸಿಬ್ಬಂದಿ)
6. ನಿವೃತ್ತ/ಮೃತ ಶಿಕ್ಷಕರ ಪಿಂಚಣಿ ಪತ್ರ / ವಾರಸುದಾರರ ಪ್ರಮಾಣ ಪತ್ರ ಇಲ್ಲದಿರುವ ಅರ್ಜಿಗಳು.
7. ಪತಿ/ಪತ್ನಿ ಇಬ್ಬರೂ ಅರ್ಜಿ ಸಲ್ಲಿಸಿದ್ದಲ್ಲಿ ಒಂದು ಅರ್ಜಿಯನ್ನು ಮಾತ್ರ ಪರಿಗಣಿಸಲಾಗುವುದು.
8. ತಿದ್ದುಪಡಿಗಳನ್ನು ಹೊಂದಿರುವ ಅರ್ಜಿಗಳು. (TAMPERED APPLICATION)
9. ಪ್ರಸಕ್ತ ಸಾಲಿನಲ್ಲಿ ಶಿಕ್ಷಕರ ಮಕ್ಕಳು ವ್ಯಾಸಂಗ ಮಾಡದೇ ಇದ್ದರೂ ಧನಸಹಾಯಕ್ಕೆ ಸಲ್ಲಿಸಿದ ಅರ್ಜಿಗಳು.
10. ಅನುತ್ತೀರ್ಣ/ ಸಂಜೆ ಕಾಲೇಜು ವ್ಯಾಸಂಗದ/ ಖಾಸಗಿ/ ಬಾಹ್ಯ/ ಮುಕ್ತ ವಿಶ್ವವಿದ್ಯಾಲಯದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ವ್ಯಾಸಂಗಕ್ಕೆ ಸಲ್ಲಿಸಿದ ಅರ್ಜಿಗಳು.
11. ಶಿಕ್ಷಕರಲ್ಲದವರ ಅರ್ಜಿಗಳು.

....2

Scanned with CamScanner

12. ಅಪೂರ್ಣ ಅರ್ಜಿಗಳು.
13. ದಿನಾಂಕ:10.03.2021 ರ ನಂತರ ಬಂದ ಅರ್ಜಿಗಳು.
14. ವ್ಯಾಸಂಗ ಪ್ರಮಾಣ ಪತ್ರ ಸಲ್ಲಿಸದ ಅರ್ಜಿಗಳು.
15. ಮೃತ ಶಿಕ್ಷಕರ ವಾರಸ್ಸುದಾರರ ಪ್ರಮಾಣ ಪತ್ರ ಹಾಗೂ ಮರಣ ಪ್ರಮಾಣ ಪತ್ರಗಳು ಇಲ್ಲದಿರುವ ಅರ್ಜಿಗಳು.
2020-2021 ನೇ ಸಾಲಿನ ಹೊಸ ಅರ್ಜಿ ನಮೂನೆಯಲ್ಲಿ ಸಲ್ಲಿಸುವುದು.

16. ಬ್ಯಾಂಕ್ ಪಾಸ್ ಬುಕ್‌ನಲ್ಲಿ ಇರುವ ಹೆಸರು ಮತ್ತು ಅರ್ಜಿಯಲ್ಲಿ ನಮೂದಿಸಿರುವ ಶಿಕ್ಷಕರ ಹೆಸರು ವ್ಯತ್ಯಾಸವಾಗಿರದಂತೆ ಪರಿಶೀಲಿಸುವುದು.

**ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ:**

| | | |
|---|---|---|
| 1 | ಶಿಕ್ಷಕರು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯಲ್ಲಿ ಅರ್ಜಿಗಳನ್ನು ಸಲ್ಲಿಸಲು ಅಂತಿಮ ದಿನಾಂಕ | 05-03-2021 |
| 2 | ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯಲ್ಲಿ ಸ್ವೀಕರಿಸಲಾದ ಎಲ್ಲಾ ಅರ್ಜಿಗಳನ್ನು ಕ್ರೋಢೀಕರಿಸಿ ನಿಧಿಗಳ ಕಛೇರಿಗೆ ತಲುಪಿಸಲು ಅಂತಿಮ ದಿನಾಂಕ. **(ಅಂತಿಮ ದಿನಾಂಕದ ನಂತರ ಕ್ಷೇತ್ರಶಿಕ್ಷಣಾಧಿಕಾರಿಗಳ ಕಛೇರಿಯಿಂದ ಬರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು)** | 10-03-2021 |

ಉಪನ್ಯಾಸಕರು/ಪ್ರಾಧ್ಯಾಪಕರು/ಮೃತಶಿಕ್ಷಕರು/ನಿವೃತ್ತಶಿಕ್ಷಕರು ನಿಧಿಕಛೇರಿಗೆ ನೇರವಾಗಿ ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿರುವ ಅಂತಿಮ ದಿನಾಂಕ: **10-03-2021** ಆಗಿದ್ದು, ಆ ನಂತರ ಬರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಈ ಸುತ್ತೋಲೆಯೊಂದಿಗೆ ಲಗತ್ತಿಸಿರುವ ಪ್ರಕಟಣೆಯನ್ನು ಮತ್ತು ಅರ್ಜಿ ನಮೂನೆಯನ್ನು **www.schooleducation.kar.nic.in** ಅಂತರ್ಜಾಲ ವಿಳಾಸದಿಂದ ಡೌನ್‌ಲೋಡ್ ಮಾಡಿಕೊಳ್ಳಲು ತಿಳಿಸಿದೆ. ಈ ಸುತ್ತೋಲೆಯನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯ ಪ್ರಕಟಣಾ ಫಲಕದ ಮೇಲೆ ಕಡ್ಡಾಯವಾಗಿ ಪ್ರಕಟಿಸುವಂತೆ ಹಾಗೂ ಈ ಬಗ್ಗೆ ಶಿಕ್ಷಕರಿಗೆ ವ್ಯಾಪಕ ಪ್ರಚಾರ ಮಾಡುವಂತೆ ತಿಳಿಸಿದೆ.

**ಅಂತಿಮ ದಿನಾಂಕದ ನಂತರ ಸ್ವೀಕೃತಿಯಗುವ ಅರ್ಜಿಗಳನ್ನು ಯಾವುದೇ ಕಾರಣದಿಂದಲೂ ಪರಿಗಣಿಸಲಾಗುವುದಿಲ್ಲ.**

ಆಯುಕ್ತರು ಹಾಗೂ ಕಾರ್ಯದರ್ಶಿ/ಖಜಾಂಚಿಗಳು

ಪ್ರತಿಗಳನ್ನು:

1. ಅಪರ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ / ಕಲಬುರಗಿ ಮಾಹಿತಿಗಾಗಿ
2. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು ಮಾಹಿತಿಗಾಗಿ.
3. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಬೆಂಗಳೂರು ಮಾಹಿತಿಗಾಗಿ.
4. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು ಮಾಹಿತಿಗಾಗಿ
5. ರಾಜ್ಯದ ಎಲ್ಲಾ ನಿರ್ದೇಶಕರು/ಸಹನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಮಾಹಿತಿಗಾಗಿ
6. ರಾಜ್ಯದ ಎಲ್ಲಾ ಸಹ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಮಾಹಿತಿಗಾಗಿ
7. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ), ಸಾ.ಶಿ.ಇ. ಮಾಹಿತಿಗಾಗಿ
8. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು ಪದವಿ ಪೂರ್ವ ಶಿಕ್ಷಣ ಇಲಾಖೆ.ಮಾಹಿತಿಗಾಗಿ
9. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾ.ಶಿ.ಇ., ಇವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
10. ಕಛೇರಿ ಪ್ರತಿ

Scanned with CamScanner